48

# ಕರ್ನಾಟಕ ವಿಧಾನ ಪರಿಷತ್ತು

## ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಡಾ॥ ವೈ. ಎ. ನಾರಾಯಣಸ್ವಾಮಿ, ಇವರು ನಿಯಮ –72 ರಡಿಯಲ್ಲಿ ನೀಡಲಾದ ಗಮನ ಸೆಳೆಯುವ ಸೂಚನ ಪತ್ರಕ್ಕೆ ಉತ್ತರ.

| |
|---|
| ಗಮನ ಸೆಳೆಯುವ ಸೂಚನೆ:- |
| ಕರ್ನಾಟಕ ಕಾರ್ಮಿಕ ಮಂಡಳಿಯಲ್ಲಿರುವ ಕಾರ್ಮಿಕರ ಕಲ್ಯಾಣಕ್ಕಾಗಿ ಸುಮಾರು ಕೋಟಿಗಳ ಅನುದಾನವಿದ್ದು, ಅದನ್ನು ಸದ್ಬಳಕೆ ಮಾಡದೆ, ಕಾರ್ಮಿಕರಿಗೆ ಸವಲತ್ತುಗಳನ್ನು ನೀಡದೇ ಇರುವುದರಿಂದ, ಕರ್ನಾಟಕ ರಾಜ್ಯದ ಕಾರ್ಮಿಕರು ಕಷ್ಟಕ್ಕೀಡಾಗಿರುವ ವಿಷಯದ ಬಗ್ಗೆ ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ. |
| ಉತ್ತರ:<br>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ, 1996 ಮತ್ತು ಕರ್ನಾಟಕ ನಿಯಮಗಳು, 2006ರ ಪ್ರಾವದಾನಗಳಡಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ನೋಂದಾಯಿತ ಫಲಾನುಭವಿಗಳಿಗೆ 19 ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಿ ಜಾರಿಗೊಳಿಸಲಾಗುತ್ತಿದೆ.(**ಸೌಲಭ್ಯಗಳ ವಿವರಗಳನ್ನು ಅನುಬಂಧ-1ರಲ್ಲಿ ನೀಡಲಾಗಿದೆ**). ಈ ಕಲ್ಯಾಣ ಸೌಲಭ್ಯಗಳನ್ನು ಜಾರಿಗೊಳಿಸಲು ನಿರ್ಮಾಣಕಾಮಗಾರಿಗಳ ವೆಚ್ಚದ ಶೇ.1ರಷ್ಟು ಮೊತ್ತವನ್ನು ಉದ್ಯೋಗದಾತರಿಂದ ಸುಂಕವಾಗಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಸುಂಕ ಕಾಯ್ದೆ, 1996 ಮತ್ತು ಕೇಂದ್ರ ನಿಯಮಗಳು, 1998ರ ಪ್ರಾವಧಾನಗಳಡಿ ಸಂಗ್ರಹಿಸಿ ಮಂಡಳಿಯಲ್ಲಿ ಸುಂಕ ನಿಧಿಯನ್ನು ಸ್ಥಾಪಿಸಲಾಗಿರುತ್ತದೆ.<br><br>ಸುಂಕ ನಿಧಿಯಲ್ಲಿ ಸಂಗ್ರಹವಾಗಿರುವ ಮೊತ್ತವನ್ನು ಕಾಯ್ದೆಯ ಕಲಂ 22 ರಲ್ಲಿ ನಮೂದಿಸಿರುವ ನಿರ್ದಿಷ್ಟ ಉದ್ದೇಶಗಳು, ಮಾನ್ಯ ಸರ್ವೋಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ. 318/ 2006 ರಲ್ಲಿ ದಿನಾಂಕ: 19-03-2018ರ ಆದೇಶದಲ್ಲಿ ನೀಡಿದ ನಿರ್ದೇಶನಗಳು ಹಾಗೂ ಕೇಂದ್ರ ಸರ್ಕಾರವು ಕಾಯ್ದೆಯ ಕಲಂ 62 ರಲ್ಲಿ ನೀಡಿದ ನಿರ್ದೇಶನಗಳನ್ವಯ ಮಾತ್ರ ಸುಂಕ ನಿಧಿಯಲ್ಲಿರುವ ಮೊತ್ತವನ್ನು ಉಪಯೋಗಿಸಲು ಅವಕಾಶವಿರುತ್ತದೆ.<br><br>ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕಾಯ್ದೆ, 1996ರ ಕಲಂ 12 (1)ರಡಿ 18 ರಿಂದ 60 ವರ್ಷ ವಯೋಮಾನದವರು ಹಾಗೂ ಕಳೆದ ವರ್ಷದಲ್ಲಿ ಕನಿಷ್ಠ 90 ದಿನ ಕಟ್ಟಡ ಮತ್ತು ಇತರೆ ನಿರ್ಮಾಣ ಕೆಲಸ ನಿರ್ವಹಿಸಿದ ಕಾರ್ಮಿಕರನ್ನು ಮಂಡಳಿಯಲ್ಲಿ ನೋಂದಾಯಿಸಲು ಪ್ರಾವದಾನಗಳಿರುತ್ತವೆ. ಕಟ್ಟಡ ಮತ್ತು ಇತರೆ ನಿರ್ಮಾಣ ಕಾಮಗಾರಿಯಲ್ಲಿ ತೊಡಗಿರುವ ಹಾಗೂ ನೋಂದಾಯಿತರಾಗಿರುವ ಕಾರ್ಮಿಕರಿಗೆ ಮಾತ್ರ ಮಂಡಳಿಯಲ್ಲಿ ಸಂಗ್ರಹವಾಗುವ ಸುಂಕ ನಿಧಿಯನ್ನು ಬಳಸಲು ಅವಕಾಶವಿರುತ್ತದೆ. |

ಮಂಡಳಿಯಿಂದ ಫಲಾನುಭವಿಗಳಿಗೆ 19 ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ಧನ ಸಹಾಯವನ್ನು ನೀಡಲಾಗುತ್ತಿದ್ದು, ಧನ ಸಹಾಯದ ಮೊತ್ತವನ್ನು ಕಾಲಕಾಲಕ್ಕೆ ಹೆಚ್ಚಿಸಲಾಗುತ್ತಿದೆ ಇದರನ್ವಯ ಮಂಡಳಿ ಪ್ರಾರಂಭವಾದಗಿನಿಂದ ಇಲ್ಲಿಯವರೆಗೆ **1,032,601 ಫಲಾನುಭವಿಗಳಿಗೆ ರೂ. 1183.19 ಕೋಟಿ** ಮೊತ್ತಗಳನ್ನು ಸಹಾಯಧನವನ್ನು ನೀಡಲಾಗಿರುತ್ತದೆ. ವಿವಿಧ ಸೌಲಭ್ಯಗಳಡಿ ಬಿಡುಗಡೆ ಮಾಡಿರುವ ವಿವರಗಳನ್ನು **ಅನುಬಂಧ-2**ರಲ್ಲಿ ನೀಡಲಾಗಿದೆ. ಈ ಎಲ್ಲಾ ಸೌಲಭ್ಯಗಳು ಘಟನಾಧಾರಿತವಾಗಿದ್ದು, ಕಾರ್ಮಿಕರ ಬದುಕಿನ ವಿವಿಧ ಹಂತ ಅಥವಾ ಘಟನೆಯ ಹಾಗೂ ಕ್ಲೇಮ್ ಆಧಾರದ ಮೇಲೆ ಆರ್ಥಿಕ ನೆರವನ್ನು ನೀಡುವ ಸೌಲಭ್ಯಗಳಾಗಿರುತ್ತವೆ.

ಇದಲ್ಲದೇ ಪ್ರಸ್ತುತ ನೀಡಲಾಗುತ್ತಿರುವ ಸೌಲಭ್ಯಗಳ ಪೈಕಿ ಬಹು ಮುಖ್ಯವಾದ ಪಿಂಚಣಿಯೋಜನೆಯನ್ನು, ಮೇ-2016 ರಿಂದ ಜಾರಿಗೆ ತರಲಾಗಿದೆ. ಈ ಯೋಜನೆಯಡಿ 60 ವರ್ಷ ಪೂರೈಸಿದ ಪ್ರತಿ ಫಲಾನುಭವಿಗೆ ಮಾಸಿಕ ರೂ. 2,000/-ಗಳ ಪಿಂಚಣಿಯನ್ನು ನೀಡಲಾಗುತ್ತಿದೆ. ಪಿಂಚಣಿದಾರರಿಗೆ ಮಾಹೆಯಾನ ರೂ. 2,000/-ಗಳ ಪಿಂಚಣಿಯನ್ನು ನಿರಂತರವಾಗಿ ಪ್ರತಿವರ್ಷ ಮತ್ತು ಅವರ ಅವಲಂಭಿತರಿಗೆ ಪ್ರತಿ ಮಾಹೆ ರೂ. 1000/-ನೀಡಲು ಅಪಾರ ಮೊತ್ತದ ಪಿಂಚಣಿ ಮೊತ್ತವನ್ನು ಕಾಯ್ದಿರಿಸಬೇಕಾಗುತ್ತದೆ.

ಮಂಡಳಿಯು ಸ್ಥಾಪನೆಯಾದಗಿನಿಂದ ಇಲ್ಲಿಯವರೆಗೆ (ಜನವರಿ -2022 ರವರೆಗೆ) **28.94** ಲಕ್ಷ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಫಲಾನುಭವಿಗಳಾಗಿ ಮಂಡಳಿಯಲ್ಲಿ ನೋಂದಣಿ ಹೊಂದಿರುತ್ತಾರೆ. **(ನೋಂದಣಿ ವಿವರವನ್ನು ಅನುಬಂಧ-3ರಲ್ಲಿ ನೀಡಲಾಗಿದೆ)**. ನೋಂದಾಣಿಯಾಗದೇ ಉಳಿದ ಅರ್ಹ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರನ್ನು ಗುರುತಿಸಿ ಅವರನ್ನು ಮಂಡಳಿಯಲ್ಲಿ ನೋಂದಾಯಿಸುವ ಪ್ರಕ್ರಿಯೆ ನಿರಂತರವಾಗಿ ನಡೆಯುತ್ತಿದೆ. ಅಲ್ಲದೆ ಕಟ್ಟಡ ಕಾಮಗಾರಿಗಳ ಸ್ಥಳಕ್ಕೆ ಭೇಟಿ ನೀಡಿ ಅಲ್ಲಿಯೇ ಅರ್ಹತೆಯಂತೆ ಕಾರ್ಮಿಕರನ್ನು ನೋಂದಾಯಿಸಲು ರಾಜ್ಯದ ತಾಲ್ಲೂಕು ಮಟ್ಟದ ಹಿರಿಯ/ಕಾರ್ಮಿಕ ನಿರೀಕ್ಷಕರುಗಳಿಗೆ ಮಂಡಳಿಯ ವತಿಯಿಂದ ಲ್ಯಾಪ್‌ಟಾಪ್ ಮತ್ತು ಇತರೆ ಪರಿಕರಣಗಳನ್ನು ಹಾಗೂ ಹೆಚ್ಚುವರಿ ಸಿಬ್ಬಂಧಿಯನ್ನು ಸಹ ಒದಗಿಸಲಾಗಿರುತ್ತದೆ.

- ಕಾರ್ಮಿಕರನ್ನು ಹೆಚ್ಚಿನ ಸಂಖ್ಯೆಯಲ್ಲಿ ನೋಂದಾಯಿಸುವ ಉದ್ದೇಶದಿಂದ ನೋಂದಣಿ ಮತ್ತು ನವೀಕರಣ ಶುಲ್ಕ ರಹಿತವಾಗಿ ಮಾಡಲು ಕ್ರಮವಹಿಸಲಾಗಿದೆ.
- ಕಾರ್ಮಿಕರಿಗೆ ಮಾಹಿತಿಯನ್ನು ನೀಡುವ ಉದ್ದೇಶದಿಂದ ಸಹಾಯವಾಣಿ ಸಂಖ್ಯೆ: 155214 ಅನ್ನು ಸ್ಥಾಪಿಸಲಾಗಿದೆ. ಇದರಿಂದ ಕಾರ್ಮಿಕರು ನೋಂದಣಿ ಹಾಗೂ ವಿವಿಧ ಸೌಲಭ್ಯಗಳಿಗೆ ಅರ್ಜಿ ಸಲ್ಲಿಸುವ ಕುರಿತು ಮಾಹಿತಿ ಪಡೆಯಬಹುದಾಗಿರುತ್ತದೆ.
- ಕಾರ್ಮಿಕರು ತಮ್ಮ ಸ್ಥಳದಿಂದಲೇ ಅರ್ಜಿ ಸಲ್ಲಿಸಲು ಆನ್‌ಲೈನ್ ವ್ಯವಸ್ಥೆ ಮಾಡಲಾಗಿದೆ.
- ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಮಂಡಳಿ ವತಿಯಿಂದ ನೀಡುತ್ತಿರುವ ಸೌಲಭ್ಯಗಳ ಕುರಿತು ಅರಿವು ಮೂಡಿಸಲು ಕಾನೂನು ಸೇವೆಗಳ ಪ್ರಾಧಿಕಾರದೊಂದಿಗೆ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಕಟ್ಟಡ ಕಾರ್ಮಿಕರ ನೋಂದಣಿ ಹಾಗೂ ಮಂಡಳಿಯ ಸೌಲಭ್ಯಗಳ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ಇದಲ್ಲದೇ, ರಾಜ್ಯದಾದ್ಯಂತ ಇರುವ ಜಿಲ್ಲಾಧಿಕಾರಿಗಳ ಕಛೇರಿ, ಜಿಲ್ಲಾ ಪಂಚಾಯತ್ ಕಛೇರಿಗಳು, ತಾಲ್ಲೂಕು ಕಛೇರಿಗಳು ಮತ್ತು ಸ್ವಂತ ಕಟ್ಟಡ ಹೊಂದಿರುವ ಕಾರ್ಮಿಕ ಇಲಾಖೆಯ ಕಛೇರಿಗಳಲ್ಲಿ ಹೋರ್ಡಿಂಗ್‌ಗಳನ್ನು ಅಳವಡಿಸುವ ಮೂಲಕ ಹಾಗೂ ಇತರೆ ಐಇಸಿ ಕಾರ್ಯಕ್ರಮಗಳ ಮೂಲಕ ಪ್ರಚಾರವನ್ನು ಕೈಗೊಳ್ಳಲಾಗಿದೆ.

ಮಂಡಳಿಯಿಂದ ನಡೆಸಲಾದ ಐಇಸಿ ಕಾರ್ಯಕ್ರಮಗಳ ಪರಿಣಾಮದಿಂದಾಗಿ ಕಳೆದ ಐದು ವರ್ಷಗಳಲ್ಲಿ ಮಂಡಳಿಯಲ್ಲಿ ನೋಂದಣಿ ಹೊಂದಿರುವ ಫಲಾನುಭವಿಗಳ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿರುವುದಲ್ಲದೇ ವರ್ಷದಿಂದ ವರ್ಷಕ್ಕೆ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಹೆಚ್ಚಿನ ಸಂಖ್ಯೆಯ ಫಲಾನುಭವಿಗಳಿಗೆ ವಿತರಿಸಲಾಗಿದೆ.

ಇದಲ್ಲದೇ ಕೋವಿಡ್-19 ರ ಮೊದಲನೇ ಮತ್ತು ಎರಡನೇ ಅಲೆಯ ಸಂದರ್ಭದಲ್ಲಿ ಸಂಕಷ್ಟಕ್ಕೊಳಗಾದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಹಾಗೂ ಅಸಂಘಟಿತ ಕಾರ್ಮಿಕರ ಅನುಕೂಲಕ್ಕಾಗಿ ಹಾಗೂ ರಕ್ಷಣೆಗಾಗಿ ಒಂದು ಬಾರಿಯ ಪರಿಹಾರವಾಗಿ ಮೊದಲನೇ ಆಲೆಯ ಸಂದರ್ಭದಲ್ಲಿ ತಲಾ ರೂ.5,000/- ಗಳಂತೆ 16,48,431 ನೋಂದಾಯಿತ ಕಾರ್ಮಿಕರಿಗೆ ರೂ. 824.21 ಕೋಟಿಗಳನ್ನು ಎರಡನೇ ಆಲೆಯ ಸಂದರ್ಭದಲ್ಲಿ ತಲಾ ರೂ.3,000/- ಗಳಂತೆ 19,39,607 ನೋಂದಾಯಿತ ಕಾರ್ಮಿಕರಿಗೆ ರೂ. 581.88 ಕೋಟಿಗಳನ್ನು Direct Benefit Transfer ಆಧಾರದಲ್ಲಿ ನೇರವಾಗಿ ಬ್ಯಾಂಕ್ ಖಾತೆಗೆ ವರ್ಗಾಯಿಸಲಾಗಿರುತ್ತದೆ. ಇದಲ್ಲದೇ ಕಾರ್ಮಿಕರ ಸಂರಕ್ಷಣೆಗಾಗಿ ಆಹಾರದ ಕಿಟ್‌ಗಳನ್ನು ಹಾಗೂ ರಕ್ಷಣಾ ಮತ್ತು ನೈರ್ಮಲ್ಯ ಕಿಟ್‌ಗಳನ್ನು ನೀಡಲಾಗಿರುತ್ತದೆ.

ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯು ಕಾಯ್ದೆ ಮತ್ತು ನಿಯಾಮಾನುಸಾರ ಸುಂಕ ಮೊತ್ತವನ್ನು ಕಟ್ಟಡ ಕಾರ್ಮಿಕರ ಕಲ್ಯಾಣಕ್ಕಾಗಿ ಮತ್ತು ಸಂರಕ್ಷಣೆಗಾಗಿ ಕಾರ್ಯ ಪ್ರವೃತ್ತವಾಗಿದೆ.

ಕಾಇ 74 ಎಲ್‌ಇಟಿ 2022

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು

# ಅನುಬಂಧ-1

## ಮಂಡಳಿಯ ವತಿಯಿಂದ ನೋಂದಾಯಿತ ಫಲಾನುಭವಿಗಳಿಗೆ ಸಿಗುವ ಸೌಲಭ್ಯಗಳು

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ **ರೂ.2,000/-**
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ / ಪತ್ನಿ ಮಾಸಿಕ **ರೂ.1000/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ/ಭಾಗಶಃ ಅಂಗವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ.2,00,000/-** ದವರೆಗೆ ಅನುಗ್ರಹ ರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. **ಟ್ರೈನಿಂಗ್-ಕಮ್-ಟೂಲ್‌ಕಿಟ್‌ಸೌಲಭ್ಯ (ಶ್ರಮ ಸಾಮರ್ಥ್ಯ) : ರೂ.30,000/- ವರೆಗೆ**
6. **ಶ್ರಮ ಸಂಸಾರ ಸಾಮರ್ಥ್ಯತರಬೇತಿ ಸೌಲಭ್ಯ:** ನೋಂದಾಯಿತ ಫಲಾನುಭವಿಯ ಅವಲಂಭಿತರಿಗೆ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
7. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
8. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಕ್ಕಳಿಗೆ ಹೆಣ್ಣು ಮಗುವಿನ ಜನನಕ್ಕೆರೂ. **30,000/-** ಮತ್ತು ಗಂಡು ಮಗುವಿನ ಜನನಕ್ಕೆ **ರೂ.20,000/-**
9. **ಶಿಶು ಪಾಲನಾ ಸೌಲಭ್ಯ:**
10. **ಅಂತ್ಯಕ್ರಿಯೆ ವೆಚ್ಚ : ರೂ.4,000/-** ಹಾಗೂ ಅನುಗ್ರಹ ರಾಶಿ **ರೂ.50,000/-**ಸಹಾಯಧನ
11. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:**

| ಕ್ರಸಂ | ತರಗತಿ (ಉತ್ತೀರ್ಣಕ್ಕೆ) | |
|---|---|---|
| 1 | ಕೆಜಿ/ ಪೂರ್ವ ಶಾಲೆ /ನರ್ಸರಿ(ವರ್ಷ 3 ರಿಂದ 5) | **5,000** |
| 2 | 1 ರಿಂದ 4ನೇ ತರಗತಿ | **5,000** |
| 3 | 5 ರಿಂದ 8ನೇ ತರಗತಿ | **8,000** |
| 4 | 9 ಹಾಗೂ 10ನೇ ತರಗತಿ | **12,000** |
| | **ಪದವಿ ಪೂರ್ವ** | |
| 5 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | **15,000** |
| 6 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | **20,000** |
| 7 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ | **40,000** |
| 8 | ಡಿ.ಎಡ್ | **25,000** |
| | ಬಿ.ಎಡ್ | **35,000** |
| 9 | ಪದವಿ ಪ್ರತಿ ವರ್ಷಕ್ಕೆ (ಯಾವುದೇ ಪದವಿ) | **25,000** |
| 10 | ಎಲ್‌ಎಲ್‌ಬಿ / ಎಲ್‌ಎಲ್‌ಎಮ್ | **30,000** |

| | | |
|---|---|---|
| 11 | ಸ್ನಾತಕೋತ್ತರ ಪದವಿ ಸೇರ್ಪಡೆಗೆ | 35,000 ಗರಿಷ್ಠ<br>2 ವರ್ಷಅವಧಿಗೆ ಒಳಪಟ್ಟು |
| ತಾಂತ್ರೀಕ/ ವೈಧ್ಯಕೀಯಎನ್ಇಇಟಿಅಥವಾ ಕೆಸಿಇಟಿ | | |
| 12 | ಬಿಇ / ಬಿ.ಟೆಕ್ಅಥವಾ ಸಂಬಂಧಪಟ್ಟಯೂಜಿಕೋರ್ಸ್ | ಸದರಿ<br>ಕೋರ್ಸ್‌ನಗರಿಷ್ಠ<br>2 ವರ್ಷಅವಧಿಗೆ ಒಳಪಟ್ಟು<br>ವಾರ್ಷಿಕ ರೂ.50,000 |
| 13 | ಎಮ್.ಟೆಕ್/ ಎಮ್ ಇ ( ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕ್ಕೊತ್ತರಕೋರ್ಸ್) | ಸದರಿ<br>ಕೋರ್ಸ್‌ನಗರಿಷ್ಠ<br>ಅವಧಿಗೆ ಒಳಪಟ್ಟು<br>ವಾರ್ಷಿಕರೂ. 60,000 |
| 14 | ವೈದ್ಯಕೀಯ(ಎಮ್‌ಬಿಬಿಎಸ್ /ಬಿಎಎಮ್ಎಸ್ / ಬಿಡಿಎಸ್ /ಬಿಹೆಚ್ಎಮ್ಎಸ್ಕೋರ್ಸ್‌ಗೆಅಥವಾಇದಕ್ಕೆ ಸಂಬಂಧಪಟ್ಟ ಸಮಾನಾಂತರ. ಸ್ನಾತಕ್ಕೊತ್ತರಕೋರ್ಸ್ | ರೂ.60,000<br>(ಸದರಿ<br>ಕೋರ್ಸ್‌ನಗರಿಷ್ಠ<br>ಅವಧಿಗೆ ಒಳಪಟ್ಟು ) |
| | ಎಮ್‌ಡಿ | ರೂ. 75,000 (ಸದರಿ<br>ಕೋರ್ಸ್‌ನಗರಿಷ್ಠ<br>ಅವಧಿಗೆ ಒಳಪಟ್ಟು) |
| 15 | ಪಿಹೆಚ್‌ಡಿ/ ಎಮ್. ಫಿಲ್ (ಯಾವುದೇ ವಿಷಯ) | ಪಿಹೆಚ್‌ಡಿಗೆಗರಿಷ್ಠ<br>ಮೂರು ವರ್ಷಗಳಿಗೆ ಹಾಗೂ<br>ಎಮ್‌ಫಿಲ್‌ಗೆ 1 ವರ್ಷಕ್ಕೆ<br>ಪ್ರತಿ ವರ್ಷ<br>ರೂ. 25,000 (ಯೂಜಿಸಿಯ<br>ಜೂನಿಯರ್‌ರಿಸರ್ಚ್ ಫೆಲೋಶಿಫ್‌ಗೆ<br>ಆಯ್ಕೆಯಾಗಿರುವ ಅಭ್ಯರ್ಥಿಗಳು ಹಾಗೂ<br>ಮತ್ತು<br>ರಾಜ್ಯ ಸರ್ಕಾರದಲ್ಲಿ ಕೆಲಸ<br>ನಿರ್ವಹಿಸುತ್ತಿರುವ ಅಭ್ಯರ್ಥಿಗಳು ಹಾಗೂ<br>ಯೂಜಿಸಿ ನಿಯಮಗಳನ್ವಯ ವೇತನ<br>ಅನುದಾನಕ್ಕೆ ಒಳಪಡುವ ಹುದ್ದೆಗಳಲ್ಲಿ<br>ಅನುದಾನಿತ<br>ಕಾಲೇಜುಗಳಲ್ಲಿ ಕೆಲಸ<br>ನಿರ್ವಹಿಸುತ್ತಿರುವ ಅಭ್ಯರ್ಥಿಗಳು<br>ಈ ಸೌಲಭ್ಯವನ್ನು ಪಡೆಯಲು<br>ಅರ್ಹರಿರುವುದಿಲ್ಲ. |
| 16 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್‌ಇಆರ್/ ಎಐಐಎಮ್‌ಎಸ್ /ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು | ಪಾವತಿಸಿದ ಬೋದನಾ ಶುಲ್ಕ |

12. **ವೈದ್ಯಕೀಯ ಸಹಾಯಧನ (ಕಾರ್ಮಿಕಆರೋಗ್ಯ ಭಾಗ್ಯ)**: ನೋಂದಾಯಿತ ಫಲಾನುಭವಿ ಹಾಗೂ ಅವರಅವಲಂಬಿತರಿಗೆರೂ.300/- ರಿಂದರೂ.10,000/-ವರೆಗೆ
13. **ಅಪಘಾತ ಪರಿಹಾರ**: ಮರಣ ಹೊಂದಿದ್ದಲ್ಲಿರೂ.5,00,000/-, ಸಂಪೂರ್ಣ ಶಾಶ್ವತದುರ್ಬಲತೆಯಾದಲ್ಲಿ ರೂ.2,00,000/- ಮತ್ತುಭಾಗಶಃ ಶಾಶ್ವತದುರ್ಬಲತೆಯಾದಲ್ಲಿ ರೂ.1,00,000/-
14. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕಚಿಕಿತ್ಸಾ ಭಾಗ್ಯ)**: ಹೃದ್ರೋಗ, ಕಿಡ್ನಿಜೋಡಣೆ, ಕ್ಯಾನ್ಸರ್ ಶಸ್ತ್ರಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮ ಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದತೊಂದರೆಗೆ ಸಂಬಂಧಿತಚಿಕಿತ್ಸೆ, ಮೂತ್ರ ಪಿಂಡದಲ್ಲಿನಕಲ್ಲುತೆಗೆಯುವಚಿಕಿತ್ಸೆ, ಮೆದುಳಿನ ರಕ್ತಸ್ರಾವದಚಿಕಿತ್ಸೆ, ಅಲ್ಸರ್‌ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ, ಕಿಡ್ನಿ ಶಸ್ತ್ರಚಿಕಿತ್ಸೆ, ಇ.ಎನ್.ಟಿ. ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕ್ಯೂಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆ ಮುರಿತ/ಡಿಸ್‌ಲೋಕೇಶನ್‌ಚಿಕಿತ್ಸೆ, ಇತರೆಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ ರೂ.2,00,000/-ವರೆಗೆ
15. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್)**: ಫಲಾನುಭವಿ ಅಥವಾಅವರಇಬ್ಬರು ಮಕ್ಕಳ ಮದುವೆಗೆತಲಾ ರೂ.50,000/-
16. ಮಂಡಳಿಯ ಫಲಾನುಭವಿಗಳ ಮಕ್ಕಳು ಐಎಎಸ್/ ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಭಾಗವಹಿಸಲು ತರಬೇತಿ
17. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ**: ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕೆಲಸ ಮಾಡುತ್ತಿರುವಂತಹ / ವಾಸಸ್ಥಳದಿಂದ ಬೆಂಗಳೂರಿಗೆ ಪ್ರಯಾಣಿಸುವ ನೋಂದಾಯಿತಕಟ್ಟಡಕಾರ್ಮಿಕರಿಗೆ
18. **ಕೆಎಸ್‌ಆರ್‌ಟಿಸಿ ಬಸ್ ಪಾಸ್‌ನ ಸೌಲಭ್ಯ**: ರಾಜ್ಯದಾದ್ಯಂತ ವಿದ್ಯಾಭ್ಯಾಸದಲ್ಲಿ ತೊಡಗಿರುವ ನೋಂದಾಯಿತ ಕಾರ್ಮಿಕರ ಇಬ್ಬರು ಮಕ್ಕಳಿಗೆ ( ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
19. **ತಾಯಿ ಮಗು ಸಹಾಯ ಹಸ್ತ**: ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವ ಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ ರೂ.6,000/- ಗಳ ಸಹಾಯಧನ.

# ಅನುಬಂಧ-02

## 2007 ರಿಂದ ಜನವರಿ -2022 ರವರೆಗೆ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳಡಿಯಲ್ಲಿ ವಿತರಿಸಲಾದ ವರ್ಷವಾರು ಸಾಧನೆಯ ವಿವರ

| ಸೌಲಭ್ಯಗಳ ವಿವರ | 2007-08 ರಿಂದ 2012-13 ರವರೆಗೆ | | 2013-14 ರಿಂದ 2017-18 ರವರೆಗೆ | | 2018-19 ರಿಂದ 2019-20 ರವರೆಗೆ | | 2020-21 | | 2021-2022 | | ಒಟ್ಟು | |
|---|---|---|---|---|---|---|---|---|---|---|---|---|
| | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ | ಸಂಖ್ಯೆ | ಮೊತ್ತ |
| ಶೈಕ್ಷಣಿಕ ಧನಸಹಾಯ | 10,896 | 2,76,79,600 | 2,27,489 | 1,03,81,26,292 | 2,21,040 | 1,25,80,68,282 | 1,15,538 | 86,93,66,430 | 134,022 | 1,365,061,609 | 708,985 | 4,558,302,213 |
| ಮದುವೆ ಧನಸಹಾಯ | 2,126 | 1,51,60,000 | 23,514 | 1,16,14,15,000 | 22,346 | 92,94,71,000 | 16,183 | 41,97,30,000 | 20,937 | 845,489,000 | 85,106 | 3,371,265,000 |
| ಅಂತ್ಯ ಸಂಸ್ಕಾರಕ್ಕೆ ವೆಚ್ಚ | 1,376 | 2,09,21,000 | 6,368 | 32,84,54,619 | 5,882 | 31,59,23,000 | 3,342 | 18,07,06,000 | 4,504 | 243,072,300 | 21,472 | 1,089,076,919 |
| ಪ್ರಮುಖ ವೈದ್ಯಕೀಯ | 233 | 81,04,269 | 2,272 | 6,39,82,540 | 1,308 | 3,54,97,780 | 1,235 | 4,67,00,314 | 1,502 | 73,169,290 | 6,550 | 227,454,193 |
| ಅಪಘಾತ ಪರಿಹಾರ | 195 | 1,47,77,740 | 185 | 2,55,74,260 | 174 | 4,57,38,000 | 129 | 2,20,59,000 | 152 | 34,819,500 | 835 | 142,968,500 |
| ನೊಂದಾಯಿತರಲ್ಲದಕಟ್ಟಡ ಕಾರ್ಮಿಕರ ಮರಣ ಪರಿಹಾರ | 0 | 0 | 0 | 0 | 0 | 0 | 14 | 29,00,000 | 12 | 2,800,000 | 26 | 5,700,000 |
| ಹೆರಿಗೆ ಧನ ಸಹಾಯ | 365 | 21,92,000 | 1,677 | 2,47,21,500 | 1,124 | 2,10,90,174 | 81 | 16,50,000 | 350 | 8,655,000 | 3,597 | 58,308,674 |
| ವೈದ್ಯಕೀಯ ವೆಚ್ಚ | 779 | 7,42,750 | 268 | 5,65,048 | 287 | 76,12,255 | 212 | 25,30,550 | 294 | 2,170,625 | 1,840 | 13,621,228 |
| ಉಪಕರಣ ಖರೀದಿಗೆ ಸಾಲ | 3 | 14,890 | 17 | 85,000 | 0 | 0 | 0 | 0 | | | 20 | 99,890 |
| ಪಿಂಚಣಿ ಸೌಲಭ್ಯ | 0 | 0 | 759 | 91,31,000 | 1,147 | 3,50,78,000 | 643 | 2,86,24,000 | 3,133 | 32,345,000 | 5,682 | 105,178,000 |
| ದುರ್ಬಲತೆ ಪಿಂಚಣಿ | 0 | 0 | 11 | 16,08,000 | 23 | 42,13,000 | 5 | 12,90,000 | 96 | 5,005,000 | 135 | 12,116,000 |
| ಕುಟುಂಬ ಪಿಂಚಣಿ | 0 | 0 | 0 | 0 | 0 | 0 | 5 | 24,000 | 7 | 44,000 | 12 | 68,000 |
| ಅನಿಲ ಭಾಗ್ಯ | 0 | 0 | 0 | 2,00,00,000 | 4,055 | 0 | 0 | 0 | | | 4,055 | 20,000,000 |
| ಶ್ರಮ ಸಾಮರ್ಥ್ಯ | 0 | 0 | 1,854 | 8,39,95,481 | 3,780 | 14,71,43,192 | 40,385 | 5,71,47,550 | 70,645 | 313,972,961 | 116,664 | 602,259,184 |
| ಬಿಎಂಟಿಸಿ ಬಸ್ ಪಾಸ್ | 0 | 0 | 0 | 5,24,79,000 | 4,598 | 5,94,300 | 50,969 | 59,49,39,450 | 12,581 | 155,059,800 | 68,148 | 803,072,550 |
| ವಸತಿ ಸೌಲಭ್ಯ | 0 | 0 | 0 | 0 | 5,129 | 76,00,00,000 | 0 | 0 | | | 5,129 | 760,000,000 |
| ಶಿಶು ಪಾಲನಾ ಕೇಂದ್ರಗಳ ಸ್ಥಾಪನೆ | 0 | 0 | 0 | 0 | 501 | 30,00,000 | 218 | 57,63,296 | 3,350 | 52,042,887 | 4,069 | 60,806,183 |
| ತಾಯಿ ಮಗು ಸಹಾಯ ಹಸ್ತ | 0 | 0 | 0 | 0 | 0 | 0 | 27 | 1,62,000 | 249 | 1,494,000 | 276 | 1,656,000 |
| ಒಟ್ಟು | **15,973** | **8,95,92,249** | **2,64,414** | **2,81,01,37,740** | **2,71,394** | **3,56,34,28,983** | **2,28,986** | **2,23,35,92,590** | **251,834** | **3,135,200,972** | **1,032,601** | **11,831,952,534** |

# ಅನುಬಂಧ-3

| ಮಂಡಳಿಯಲ್ಲಿ ನೋಂದಣಿಯಾದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಜಿಲ್ಲಾವಾರು ವಿವರ | | |
|---|---|---|
| **SL.No** | **District Name** | **Total** |
| 1 | BANGALORE | 204243 |
| 2 | GULBARGA | 223645 |
| 3 | BIDAR | 183779 |
| 4 | HAVERI | 135480 |
| 5 | BELGAUM | 121706 |
| 6 | DAVANAGERE | 90049 |
| 7 | SHIMOGA | 97215 |
| 8 | DHARWAD | 87473 |
| 9 | KOPPAL | 84176 |
| 10 | CHITRADURGA | 98003 |
| 11 | BELLARY | 70511 |
| 12 | KOLAR | 78131 |
| 13 | BIJAPUR | 77984 |
| 14 | BAGALKOT | 65982 |
| 15 | Yadgiri | 83068 |
| 16 | MYSORE | 71384 |
| 17 | UTTARA KANNADA | 58295 |
| 18 | CHIKMAGALUR | 54675 |
| 19 | TUMKUR | 57135 |
| 20 | DAKSHINA KANNAD | 49639 |
| 21 | GADAG | 48353 |
| 22 | HASSAN | 47176 |
| 23 | RAICHUR | 80895 |
| 24 | UDUPI | 39834 |
| 25 | RAMANAGARA | 30146 |
| 26 | CHAMARAJA NAGAR | 32376 |
| 27 | CHIKBALLAPUR | 28267 |
| 28 | MANDYA | 18999 |
| 29 | KODAGU | 4679 |
| | **Total** | **2,894,389** |